# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 980(1073)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಐ. ಟಿ. ಐ. ಕಾಲೇಜುಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಐ.ಟಿ.ಐ. ಕಾಲೇಜುಗಳಿವೆ; ಈ ಕಾಲೇಜುಗಳಲ್ಲಿ ಲಭ್ಯವಿರುವ ಕೋರ್ಸ್‌ಗಳು ಯಾವುವು; ಕಳೆದ 3 ವರ್ಷಗಳಲ್ಲಿ ಈ ಕಾಲೇಜುಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಆ) ಈಗಿನ ತಾಂತ್ರಿಕ ಆವಿಷ್ಕಾರಗಳಿಗೆ ಸಹಾಯಕವಾಗದ ಕೆಲವು ಕೋರ್ಸ್‌ಗಳನ್ನು ಮುಚ್ಚಿ ಕೈಗಾರಿಕೆಗಳ ಬೇಡಿಕೆಗೆ ತಕ್ಕಂತೆ ಹೊಸ ಕೋರ್ಸ್‌ಗಳನ್ನು ಅಳವಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಂಡಿರುವುದೇ; (ಮಾಹಿತಿ ನೀಡುವುದು)

(ಇ) ಆಯಾ ಕಾಲದ ತಾಂತ್ರಿಕ ಆವಿಷ್ಕಾರಗಳಿಗೆ ತಕ್ಕಂತೆ ಐ.ಟಿ.ಐ. ಕೋರ್ಸ್‌ಗಳನ್ನು ಪರಿಷ್ಕರಿಸಿರುವುದರಿಂದ ಐ.ಟಿ.ಐ. ಕಾಲೇಜುಗಳಿಗೆ ವಿದ್ಯಾರ್ಥಿಗಳ ದಾಖಲಾತಿ ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಕಾರ್ಮಿಕರ ವೇತನ ಹಾಗೂ ಇನ್ನಿತರೆ ಸವಲತ್ತುಗಳನ್ನು ನೀಡುವಲ್ಲಿ ಕಂಪನಿಯು ಸರ್ಕಾರ ವೇತನ ಪಾವತಿ ಹಾಗೂ ಕಂಪನಿ ನಿಯಮಗಳನ್ನು ಪಾಲಿಸಿದೆಯೇ;

(ಉ) ಕಂಪನಿ ಕಾಯ್ದೆ ಹಾಗೂ ಕಾರ್ಮಿಕರ ವೇತನ ನಿಯಮಗಳ ಕಾಯ್ದೆಯನ್ನು ಪಾಲಿಸಲು ಕಾರ್ಮಿಕ ಇಲಾಖೆಯ ಅಧಿಕಾರಿಗಳು ವಿಫಲವಾಗಿರುವುದು ಏಕೆ;

(ಊ) ಪ್ರಸ್ತುತ ಕಂಪನಿಯು ಪುನರಾರಂಭವಾಗಿರುವುದರಿಂದ ಹಿಂದಿನ ಸಮಸ್ಯೆಗಳೆಲ್ಲವನ್ನು ಪರಿಹರಿಸಲಾಗಿದೆಯೇ?